ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಅನುಭವ ಮಂಟಪಕ್ಕೆ ಮತ್ತೆ ₹100 ಕೋಟಿ

- ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಆಹ್ವಾನ
- ಕಾಮಗಾರಿ 2 ವರ್ಷಗಳಲ್ಲಿ ಪೂರ್ಣಗೊಳಿಸಲು ನಿರ್ಧಾರ
- ಪ್ರತಿ ವರ್ಷ ಬಸವ ಉತ್ಸವ ಆಯೋಜನೆಗೆ ಅನುದಾನ
- ವಚನ ವಿಶ್ವವಿದ್ಯಾಲಯ ಆರಂಭಿಸಲು ಸಮಾಲೋಚನೆ

ಸಂ.ಕ. ಸಮಾಚಾರ, ಬಸವಕಲ್ಯಾಣ

ಸಾರ್ವಜನಿಕ ವಲಯದಲ್ಲಿ ಬಹು ನಿರೀಕ್ಷಿತ ನೂತನ ಅನುಭವ ಮಂಟಪ ನಿರ್ಮಾಣಕ್ಕೆ ನಾಲ್ಕು ದಿನಗಳಲ್ಲಿ 100 ಕೋಟಿ ರೂ.ಗಳ ಇನ್ನೊಂದು ಕಂತನ್ನು ಬಿಡುಗಡೆ ಮಾಡುವುದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಘೋಷಿಸುವ ಮೂಲಕ 12 ನೆ ಶತಮಾನದಲ್ಲಿನ ಶರಣರು ಮೆಟ್ಟಿದ ನಾಡು ಬೀದರ್ ಜಿಲ್ಲೆ ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪ ನಿರ್ಮಾಣ ಕಾಲಮಿತಿ ಒಳಗಾಗಿ ಪೂರ್ಣಗೊಳ್ಳುವುದಕ್ಕೆ ಅನುವು ಮಾಡಿದರು.

ಬುಧವಾರ ನೂತನ ಅನುಭವ ಮಂಟಪಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಬಸವ ಭಕ್ತರನ್ನು ಮತ್ತು ಇನ್ನುಳಿದವರನ್ನು ಉದ್ದೇಶಿಸಿ ಮಾತನಾಡುತ್ತಿದ್ದರು. ನೂತನ ಅನುಭವ ಮಂಟಪ ನಿರ್ಮಾಣಕ್ಕೆ 100 ಕೋಟಿ ರೂ.ಗಳ ಮೊದಲ ಕಂತು ಈಗಾಗಲೇ ಬಿಡುಗಡೆ ಮಾಡಲಾಗಿದೆ ಎಂದು ಅವರು ಪ್ರತಿಪಾದಿಸಿದರು.

ನೂತನ ಅನುಭವ ಮಂಟಪ ಕಾಮಗಾರಿಯನ್ನು ಮುಂದಿನ ಎರಡು ವರ್ಷಗಳಲ್ಲಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದ ಅವರು ನೂತನ ಅನುಭವ ಮಂಟಪದ ಉದ್ಘಾಟನಾ ಸಮಾರಂಭಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಲಾಗುವುದು ಎಂದು ನುಡಿದರು. ಈ ಕಾಮಗಾರಿಯನ್ನು ಮುಂದಿನ 2 ವರ್ಷಗಳಲ್ಲಿ ಪೂರ್ಣಗೊಳಿಸುವ ಉಸ್ತುವಾರಿಕೆಯನ್ನು ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ ಕೃಷಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಬಸವರಾಜ್ ಪಾಟೀಲ್ ಸೇಡಂ ಅವರಿಗೆ ವಹಿಸುವುದಾಗಿ ಮುಖ್ಯಮಂತ್ರಿ ತಿಳಿಸಿದರು.

ಬಸವಕಲ್ಯಾಣದಲ್ಲಿ ವಚನ ವಿಶ್ವವಿದ್ಯಾಲಯ ಆರಂಭಿಸುವುದರ ಬಗ್ಗೆ ಗೊರುಚ ಅವರಂಥ ಪರಿಣಿತರೊಂದಿಗೆ ಸಮಾಲೋಚನೆ ನಡೆಸಿ ಮುಂದುವರೆಯಲಾಗುವುದು ಎಂದು ಬಸವ ಭಕ್ತರ ಕರತಾಡನದ ಮಧ್ಯೆ ನುಡಿದರು.



ಫೋಟೋ : ಗೋಪಿಚಂದ್ ತಾಂದಳೆ

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಬುಧವಾರ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪಕ್ಕೆ ಭೂಮಿ ಪೂಜೆ ನೆರವೇರಿಸಿದರು.